Akashvani : Bangalore
National Bulletin In Kannada
08.02.2025 / 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
08.02.2025 / 7.35AM
******

ಮುಖ್ಯಾಂಶಗಳು :

1. ಪ್ರಧಾನಿ ನರೇಂದ್ರ ಮೋದಿ ಸೋಮವಾರದಿಂದ ಮೂರು ದಿನಗಳ ಫ್ರಾನ್ಸ್ ಭೇಟಿ; ಕೃತಕ ಬುದ್ಧಿಮತ್ತೆ ಕುರಿತ ಶೃಂಗಸಭೆಯಲ್ಲಿ ಭಾಗಿ
2. ರಾಷ್ಟ್ರೀಯ ಸಫಾಯಿ ಕರ್ಮಚಾರಿ ಆಯೋಗದ ಅಧಿಕಾರಾವಧಿಯನ್ನು ವಿಸ್ತರಿಸಿದ ಕೇಂದ್ರ ಸರ್ಕಾರ
3. ದೆಹಲಿ ವಿಧಾನಸಭಾ ಚುನಾವಣೆ; ಇಂದು ಮತ ಎಣಿಕೆ
4. ಒಂಬತ್ತನೇ ಏಷ್ಯನ್ ಚಳಿಗಾಲದ ಕ್ರೀಡಾಕೂಟ; ಈಶಾನ್ಯ ಚೀನಾದ ಹಾರ್ಬಿನ್‌ನಲ್ಲಿ ಆರಂಭ

*****

ಪ್ರಧಾನಮಂತ್ರಿ ನರೇಂದ್ರ ಮೋದಿ, ಸೋಮವಾರದಿಂದ ಮೂರು ದಿನ ಫಾನ್ಸ್‌ಗೆ ಭೇಟಿ ನೀಡಲಿದ್ದಾರೆ. ಈ ಭೇಟಿಯ ಸಂದರ್ಭದಲ್ಲಿ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರಾನ್ ಅವರೊಂದಿಗೆ ಕೃತಕ ಬುದ್ಧಿಮತ್ತೆ ಶೃಂಗಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ದೆಹಲಿಯಲ್ಲಿ ತಿಳಿಸಿದ್ದಾರೆ. ಇದೇ ತಿಂಗಳ ೧೨ ಮತ್ತು ೧೩ ರಂದು ಪ್ರಧಾನಿ ನರೇಂದ್ರ ಮೋದಿ, ಅಮೆರಿಕಾಕ್ಕೆ ಭೇಟಿ ನೀಡಲಿದ್ದು, ನೂತನ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ.

*****

ಕೌಶಲ್ಯ ಭಾರತ ಕಾರ್ಯಕ್ರಮಕ್ಕಾಗಿ ಕೇಂದ್ರ ಸರ್ಕಾರವು ೨೦೨೨-೨೩ ರಿಂದ ೨೦೨೫-೨೬ರವರೆಗಿನ ಅವಧಿಯಲ್ಲಿ ಎಂಟು ಸಾವಿರ ೮೦೦ ಕೋಟಿ ರೂಪಾಯಿಗಳನ್ನು ಅನುಮೋದಿಸಿದೆ. ನವದೆಹಲಿಯಲ್ಲಿ ನಿನ್ನೆ ಮಾಧ್ಯಮಗಳಿಗೆ ಮಾಹಿತಿ ನೀಡಿದ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ಬೇಡಿಕೆ ಆಧಾರಿತ ಕೌಶಲ್ಯ ಅಭಿವೃದ್ಧಿ ಸರ್ಕಾರದ ಮುಖ್ಯ ಆದ್ಯತೆಯಾಗಿದೆ ಮತ್ತು ಗುಣಮಟ್ಟ ವರ್ಧನೆಗೆ ಒತ್ತು ನೀಡಲಾಗುವುದು ಎಂದು ಹೇಳಿದರು. ರಾಷ್ಟ್ರೀಯ ಸಫಾಯಿ ಕರ್ಮಚಾರಿ ಆಯೋಗದ ಅಧಿಕಾರಾವಧಿಯನ್ನು ಮಾರ್ಚ್ ೩೧, ೨೦೨೮ ರವರೆಗೆ ಮೂರು ವರ್ಷಗಳ ಕಾಲ ವಿಸ್ತರಿಸಲು ಸರ್ಕಾರ ಅನುಮೋದನೆ ನೀಡಿದೆ ಎಂದು ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.

ಧ್ವನಿ : ಅಶ್ವಿನಿ ವೈಷ್ಣವ್ (೨೮ ಸೆಕೆಂಡ್ಸ್)

ರೈಲ್ವೆ ಕಾರ್ಯಾಚರಣೆಗಳಲ್ಲಿ ದಕ್ಷತೆಯನ್ನು ಹೆಚ್ಚಿಸಲು ದಕ್ಷಿಣ ಕರಾವಳಿ ರೈಲ್ವೆ ವಲಯಕ್ಕೆ ಪೋಸ್ಟ್ ಫ್ಯಾಕ್ಟೋ ಅನುಮೋದನೆ ನೀಡಲಾಗಿದೆ ಎಂದು ಸಚಿವರು ಮಾಹಿತಿ ನೀಡಿದರು.

*****

ಲೋಕಸಭೆಯಲ್ಲಿ ನಿನ್ನೆ ೨೦೨೫-೨೬ನೇ ಸಾಲಿನ ಬಜೆಟ್ ಮೇಲಿನ ಚರ್ಚೆಯನ್ನು ಕೈಗೆತ್ತಿಕೊಳ್ಳಲಾಗಿತ್ತು. ಚರ್ಚೆಯಲ್ಲಿ ಭಾಗವಹಿಸಿದ ಬಿಜೆಪಿಯ ರಾವ್ ರಾಜೇಂದ್ರ ಸಿಂಗ್, ಕೇಂದ್ರ ಬಜೆಟ್ ಅನ್ನು ಶ್ಲಾಘಿಸಿ, ಬಡವರು, ರೈತರು ಮತ್ತು ಮಹಿಳೆಯರ ಹಿತಾಸಕ್ತಿಗಳನ್ನು ಕಾಳಜಿ ವಹಿಸಿದೆ ಎಂದು ಹೇಳಿದರು. ಸರ್ಕಾರವು ರೈತರ ಯೋಗಕ್ಷೇಮದ ಮೇಲೆ ಕೇಂದ್ರೀಕರಿಸಿದೆ ಮತ್ತು ಈ ದಿಕ್ಕಿನಲ್ಲಿ ಹಲವಾರು ಉಪಕ್ರಮಗಳನ್ನು ತೆಗೆದುಕೊಂಡಿದೆ ಎಂದು ಅವರು ಹೇಳಿದರು. ದೇಶದಲ್ಲಿ ಬೆಳೆಯುತ್ತಿರುವ ಪ್ರವಾಸೋದ್ಯಮ ಮತ್ತು ವಾಯುಯಾನ ಉದ್ಯಮಗಳ ಬಗ್ಗೆಯೂ ಅವರು ಪ್ರಸ್ತಾಪಿಸಿದರು. ವಿವಿಧ ಕ್ಷೇತ್ರಗಳಲ್ಲಿ ಕೇಂದ್ರ ಸರ್ಕಾರದ ಸಾಧನೆಗಳು ಮತ್ತು ದೇಶದಲ್ಲಿ ಆರ್ಥಿಕತೆಯನ್ನು ಬಲಪಡಿಸಲು ತೆಗೆದುಕೊಂಡ ಕ್ರಮಗಳ ಬಗ್ಗೆ ಅವರು ವಿವರಿಸಿದರು.

*****

ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭಮೇಳದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿ ರಾಜ್ ಸಚಿವಾಲಯವು ಮಂಟಪವೊಂದನ್ನು ಸ್ಥಾಪಿಸಿದೆ. ಮಂಟಪವು ಸರ್ಕಾರಿ ಯೋಜನೆಗಳು ಮತ್ತು ಅಗತ್ಯ ಸೌಲಭ್ಯಗಳನ್ನು ಹೊಂದಿರುವ ಆದರ್ಶ ಗ್ರಾಮ ಮಾದರಿಯನ್ನು ಪ್ರದರ್ಶಿಸುತ್ತಿದೆ. ಸಚಿವಾಲಯವು ಪ್ರಸ್ತುತಪಡಿಸಿದ ಆದರ್ಶ ಗ್ರಾಮದ ಮಂಟಪವು ಶಾಲೆ, ಪಂಚಾಯತ್ ಘರ್, ಅಂಗನವಾಡಿ, ಶಾಶ್ವತ ವಸತಿ ಮತ್ತು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯ್ದೆಯಡಿ ಒದಗಿಸಲಾದ ಉದ್ಯೋಗಾವಕಾಶಗಳು ಸೇರಿದಂತೆ ವಿವಿಧ ಸೌಲಭ್ಯಗಳ ಬಗ್ಗೆ ಮಾಹಿತಿ ಹೊಂದಿದೆ.

*****

ದೆಹಲಿ ವಿಧಾನಸಭೆ ಚುನಾವಣೆಯ ಮತ ಎಣಿಕೆ ಇಂದು ನಡೆಯಲಿದ್ದು, ಇದಕ್ಕಾಗಿ ಮೂರು ಹಂತದ ಭದ್ರತಾ ವ್ಯವಸ್ಥೆ ಕೈಗೊಳ್ಳಲಾಗಿದೆ. ಮತ ಎಣಿಕೆ ಕೇಂದ್ರಗಳಿಗೆ ಅಧಿಕೃತ ಸಿಬ್ಬಂದಿಗೆ ಮಾತ್ರ ಅವಕಾಶ ನೀಡಲಾಗುವುದು. ಮತ ಎಣಿಕೆ ಕಾರ್ಯ ಬೆಳಗ್ಗೆ ೮ ಗಂಟೆಯಿಂದ ಆರಂಭವಾಗಲಿದೆ. ಮತ ಎಣಿಕೆ ಕೇಂದ್ರ ಆವರಣದಲ್ಲಿ ಮೊಬೈಲ್ ಫೋನ್ ಬಳಕೆಯನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ ಎಂದು ದೆಹಲಿಯ ಮುಖ್ಯ ಚುನಾವಣಾಧಿಕಾರಿ ಆರ್.ಆಲಿಸ್ ವಾಜ್ ತಿಳಿಸಿದ್ದಾರೆ.  ೭೦ ಸದಸ್ಯ ಬಲದ ದೆಹಲಿ ವಿಧಾನಸಭೆಗೆ ಫೆಬ್ರವರಿ ೫ ರಂದು ಮತದಾನ ನಡೆದಿತ್ತು.  ಮತ ಎಣಿಕೆಗಾಗಿ ದೆಹಲಿಯ ೧೧ ಜಿಲ್ಲೆಗಳಲ್ಲಿ ೧೯ ಎಣಿಕೆ ಕೇಂದ್ರಗಳನ್ನು ಸ್ಥಾಪಿಸಲಾಗಿದೆ.

*****

ದೇಶದಲ್ಲಿ ವಿಮಾನ ಘಟಕಗಳ ಉತ್ಪಾದನೆಯನ್ನು ಪರಿಶೀಲಿಸಲು ಮತ್ತು ಮುನ್ನಡೆಸಲು ನಾಗರಿಕ ವಿಮಾನಯಾನ ಸಚಿವಾಲಯವು ನಡೆಸಿದ ಚರ್ಚೆಯಲ್ಲಿ ಕೇಂದ್ರ ಸಚಿವ ರಾಮ್‌ಮೋಹನ್ ನಾಯ್ಡು ಅಧ್ಯಕ್ಷತೆ ವಹಿಸಿದ್ದರು. ನಾಗರಿಕ ವಿಮಾನಯಾನ ಕಾರ್ಯದರ್ಶಿ ವಿ. ವುಯಲ್ನಾಮ್ ಮತ್ತು ಕೈಗಾರಿಕಾ ಸಂಘಗಳು, ಸಂಶೋಧನಾ ಸಂಸ್ಥೆಗಳು ಮತ್ತು ವಿವಿಧ ಸರ್ಕಾರಿ ಇಲಾಖೆಗಳ ಪ್ರತಿನಿಧಿಗಳು ಸೇರಿದಂತೆ ಹಿರಿಯ ಅಧಿಕಾರಿಗಳು ಈ ಚರ್ಚೆಯಲ್ಲಿ ಭಾಗವಹಿಸಿದ್ದರು. ದೇಶೀಯ ಉತ್ಪಾದನೆಯನ್ನು ಬಲಪಡಿಸುವುದು ಮತ್ತು ವಿಮಾನ ಘಟಕಗಳ ಉತ್ಪಾದನಾ ಕ್ಷೇತ್ರದಲ್ಲಿ ಭಾರತದ ಜಾಗತಿಕ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸುವುದರ ಮೇಲೆ ಚರ್ಚೆಗಳು ಕೇಂದ್ರೀಕೃತವಾಗಿವೆ.

*****

ಏಷ್ಯಾದ ಅತಿದೊಡ್ಡ ಏರ್ ಶೋ - ಏರೋ ಇಂಡಿಯಾ ೨೦೨೫ರ ೧೫ನೇ ಆವೃತ್ತಿಯು ಬೆಂಗಳೂರಿನ ಯಲಹಂಕದ ವಾಯುಪಡೆ ನಿಲ್ದಾಣದಲ್ಲಿ ಇದೇ ೧೦ ರಿಂದ ೧೪ ರವರೆಗೆ ನಡೆಯಲಿದೆ. ಕಾರ್ಯಕ್ರಮದ ಮೊದಲ ಮೂರು ದಿನಗಳು ವಾಣಿಜ್ಯ ವ್ಯವಹಾರದ ದಿನಗಳಾಗಿದ್ದು, ೧೩ ಮತ್ತು ೧೪ ರಂದು ಪ್ರದರ್ಶನವನ್ನು ಸಾರ್ವಜನಿಕರು ವೀಕ್ಷಿಸಲು ಅನುವು ಮಾಡಿಕೊಡಲಾಗಿದೆ. ಏರ್ ಶೋ ಹಿನ್ನೆಲೆಯಲ್ಲಿ ಈಗಾಗಲೇ ಲೋಹದ ಹಕ್ಕಿಗಳು ತಾಲೀಮು ನಡೆಸುತ್ತಿವೆ. ವೈಮಾನಿಕ ಪ್ರದರ್ಶನಕ್ಕೆ ಭೇಟಿ ನೀಡುವ ಜನರ ಸುರಕ್ಷತೆ ಖಾತರಿ ಪಡಿಸಿಕೊಳ್ಳಲು ಗೃಹ ಸಚಿವಾಲಯ, ಬೆಂಗಳೂರು ಪೊಲೀಸ್, ಸಿಐಎಸ್‌ಎಫ್ ಮತ್ತು ಗುಪ್ತಚರ ಸಂಸ್ಥೆಗಳ ಸಹಯೋಗದೊಂದಿಗೆ ಬಹು ಹಂತದ ಭದ್ರತಾ ವ್ಯವಸ್ಥೆ ಕಲ್ಪಿಸಲಾಗಿದೆ.

ದಿನದ ೨೪ ಗಂಟೆಯೂ ಸಿಸಿಟಿವಿ ಮೇಲ್ವಿಚಾರಣೆ ಇರಲಿದೆ. ಪ್ರದರ್ಶನ ಸ್ಥಳದಲ್ಲಿ ಸಂದರ್ಶಕರ ಸುಗಮ ಸಂಚಾರಕ್ಕಾಗಿ ೧೦೦ಕ್ಕೂ ಅಧಿಕ ಇ-ಕಾರ್ಟ್‌ಗಳ ವಿಶೇಷ ಬಳಕೆಗೆ ನಿರ್ಧರಿಸಲಾಗಿದೆ. ಅಲ್ಲದೇ ಈ ಪ್ರದೇಶದಲ್ಲಿ ಅನಧಿಕೃತ ಡ್ರೋನ್ ಚಟುವಟಿಕೆ ನಿರ್ವಹಿಸಲು, ನಿಗ್ರಹ ಕ್ರಮಗಳೊಂದಿಗೆ ಕೆಂಪು ಡ್ರೋನ್ ವಲಯಗಳನ್ನು ಗೊತ್ತುಪಡಿಸಲಾಗಿದೆ. ಯಲಹಂಕ ವಾಯುಪಡೆ ನಿಲ್ದಾಣಕ್ಕೆ ಭೇಟಿ ನೀಡುವವರಿಗೆ ಉಚಿತ ಸಾರಿಗೆ ಸೌಲಭ್ಯಗಳನ್ನು ಒದಗಿಸಲು ರಕ್ಷಣಾ ಸಚಿವಾಲಯ ಎಸಿ, ವೊಲ್ವೊ, ಶೆಟಲ್ ಬಸ್‌ಗಳನ್ನು ಗುತ್ತಿಗೆ ಪಡೆದುಕೊಂಡಿದೆ.

*****

ಜಮ್ಮು ಮತ್ತು ಕಾಶ್ಮೀರದಲ್ಲಿ, ರೇಷ್ಮೆ ಕೃಷಿ ಇಲಾಖೆಯು ಇಂದು ಉಧಂಪುರ ಜಿಲ್ಲೆಯಲ್ಲಿ ರೇಷಮ್ ಕಿಸಾನ್ ಮೇಳವನ್ನು ಆಯೋಜಿಸುತ್ತಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಮನರಂಜನೆ, ಸೃಜನಶೀಲತೆ ಮತ್ತು ಸಂಸ್ಕೃತಿಯ ಭಾಗವಾಗಿ ಜಗತ್ತನ್ನು ಒಟ್ಟುಗೂಡಿಸುವ ಜಾಗತಿಕ ಶೃಂಗಸಭೆಯಾದ ವೇವ್ಸ್ ಸಲಹಾ ಮಂಡಳಿಯ ವಿಸ್ತೃತ ಸಭೆಯನ್ನು ನಿನ್ನೆ ನಡೆಸಿದರು. ನಟರಾದ ಅಮಿತಾಬ್ ಬಚ್ಚನ್, ದಿಲ್ಜಿತ್ ದೋಸಾಂಜ್, ರಜನಿಕಾಂತ್, ಶಾರುಖ್ ಖಾನ್, ರಣಬೀರ್ ಕಪೂರ್, ಚಿರಂಜೀವಿ, ಅನಿಲ್ ಕಪೂರ್, ಅಕ್ಷಯ್ ಕುಮಾರ್ ಮತ್ತು ಅನುಪಮ್ ಖೇರ್ ಸೇರಿದಂತೆ ಭಾರತ ಮತ್ತು ಪ್ರಪಂಚದ ಉನ್ನತ ವೃತ್ತಿಪರರೊಂದಿಗೆ ಅವರು ಸಂವಾದ ನಡೆಸಿದರು. ಸಾಮಾಜಿಕ ಮಾಧ್ಯಮದಲ್ಲಿ ಪ್ರಧಾನಿ ಅವರು ಈ ವಿಷಯವನ್ನು ಪ್ರಸ್ತಾಪಿಸಿದ್ದಾರೆ.

*****

ಜಮ್ಮು ಮತ್ತು ಕಾಶ್ಮೀರದಲ್ಲಿ, ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯ ಜಲಾನಯನ ಅಭಿವೃದ್ಧಿ ಘಟಕದ ಅಡಿಯಲ್ಲಿ ಜಲಾನಯನ ಕಾರ್ಯಕ್ರಮವನ್ನು ಕಥುವಾ ಜಿಲ್ಲೆಯ ಹಿರಾನಗರದ ಕೃಷಿ ಉತ್ಪಾದನೆ, ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಮತ್ತು ಸಹಕಾರಿ ಸಚಿವ ಜಾವೇದ್ ಅಹ್ಮದ್ ದಾರ್ ಉದ್ಘಾಟಿಸಿದರು. "ಜಲಾನಯನ ಯಾತ್ರೆ"ಯ ಧ್ವಜಾರೋಹಣ ಸಮಾರಂಭದಲ್ಲಿ ಮಾತನಾಡಿದ ಸಚಿವ ಜಾವೇದ್ ಅಹ್ಮದ್ ದಾರ್, ನಗರೀಕರಣ ಮತ್ತು ಕೈಗಾರಿಕಾ ವಿಸ್ತರಣೆಯಿಂದಾಗಿ ಹೆಚ್ಚುತ್ತಿರುವ ಪರಿಸರ ಕಾಳಜಿಯ ಬಗ್ಗೆ ಪ್ರಸ್ತಾಪಿಸಿದರು. ಪರಿಸರ ಸಮತೋಲನಕ್ಕೆ ಅನುಗುಣವಾಗಿ ಮಾತ್ರ ಅಭಿವೃದ್ಧಿಯನ್ನು ಸಾಧಿಸಬೇಕು, ಹವಾಮಾನ ಬದಲಾವಣೆಯ ಪರಿಣಾಮಗಳನ್ನು ತಗ್ಗಿಸಲು ಮತ್ತು ಸುಸ್ಥಿರ ಬೆಳವಣಿಗೆಯನ್ನು ಖಚಿತಪಡಿಸಿಕೊಳ್ಳಲು ನೈಸರ್ಗಿಕ ಸಂಪನ್ಮೂಲಗಳನ್ನು, ವಿಶೇಷವಾಗಿ ಜಲಮೂಲಗಳು ಮತ್ತು ಅರಣ್ಯ ಪ್ರದೇಶವನ್ನು ಸಂರಕ್ಷಿಸುವ ನಿಟ್ಟಿನಲ್ಲಿ ಕಾರ್ಯೋನ್ಮುಕರಾಗಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ, ಸಚಿವರು "ಜಲಾನಯನ ಯಾತ್ರಾ ವ್ಯಾನ್"ಗೆ ಚಾಲನೆ ನೀಡಿದರು, ಇದು ಜಮ್ಮು ಮತ್ತು ಕಾಶ್ಮೀರದಾದ್ಯಂತ ೨೪೦೦ ಕಿ.ಮೀ. ಕ್ರಮಿಸಲಿದ್ದು, ಸಂವಾದಾತ್ಮಕ ಕಾರ್ಯಾಗಾರಗಳು, ಸಮುದಾಯ ಚಟುವಟಿಕೆಗಳು ಮತ್ತು ಜಾಗೃತಿ ಅಭಿಯಾನಗಳ ಮೂಲಕ ೫ ಲಕ್ಷಕ್ಕೂ ಹೆಚ್ಚು ನಿವಾಸಿಗಳನ್ನು ತಲುಪಲಿದೆ. ಮಾರ್ಚ್ ೧, ೨೦೨೫ ರವರೆಗೆ ನಡೆಯುವ ಈ ಅಭಿಯಾನವು ಜಮ್ಮುವಿನಲ್ಲಿ ಮುಕ್ತಾಯಗೊಳ್ಳಲಿದ್ದು, ಜಲಾನಯನ ಸಂರಕ್ಷಣೆ, ಮಣ್ಣಿನ ಆರೋಗ್ಯ ವರ್ಧನೆ ಮತ್ತು ಮಳೆನೀರು ಕೊಯ್ಲುಗಳಲ್ಲಿ ಸುಧಾರಿತ ತಂತ್ರಗಳನ್ನು ಪ್ರದರ್ಶಿಸಲಿದೆ.

*****

ಒಂಬತ್ತನೇ ಏಷ್ಯನ್ ಚಳಿಗಾಲದ ಕ್ರೀಡಾಕೂಟ ೨೦೨೫, ಈಶಾನ್ಯ ಚೀನಾದ ಹೈಲಾಂಗ್‌ಜಿಯಾಂಗ್ ಪ್ರಾಂತ್ಯದ ರಾಜಧಾನಿ ಹಾರ್ಬಿನ್‌ನಲ್ಲಿ ಆರಂಭವಾಗಿದೆ. ಅಂತರರಾಷ್ಟ್ರೀಯ ಒಲಿಂಪಿಕ್ ಸಮಿತಿಯ ಅಧ್ಯಕ್ಷ ಥಾಮಸ್ ಬಾಚ್ ಸೇರಿದಂತೆ ಹಲವು ಗಣ್ಯರ ಸಮ್ಮುಖದಲ್ಲಿ ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಕ್ರೀಡಾಕೂಟಕ್ಕೆ ಚಾಲನೆ ನೀಡಿದರು. ಈ ತಿಂಗಳ ೧೪ ರವರೆಗೆ ಕ್ರೀಡಾಕೂಟ ಮುಂದುವರಿಯಲಿದೆ. ಈ ಬಾರಿ ದಾಖಲೆಯ ೩೪ ದೇಶಗಳು ಈ ಕ್ರೀಡಾಕೂಟದಲ್ಲಿ ಸ್ಪರ್ಧಿಸುತ್ತಿವೆ. ೫೯ ಕ್ರೀಡಾಪಟುಗಳು ಮತ್ತು ೨೯ ತಂಡದ ಅಧಿಕಾರಿಗಳನ್ನು ಒಳಗೊಂಡ ೮೮ ಸದಸ್ಯರ ಭಾರತೀಯ ತಂಡವು ಈ ಕ್ರೀಡಾಕೂಟದಲ್ಲಿ ಭಾಗವಹಿಸಲಿದೆ.

*****

ಉತ್ತರಾಖಂಡದಲ್ಲಿ ನಡೆಯುತ್ತಿರುವ ೩೮ನೇ ರಾಷ್ಟ್ರೀಯ ಕ್ರೀಡಾಕೂಟ ನಿನ್ನೆ ಫುಟ್ಬಾಲ್, ಬಾಕ್ಸಿಂಗ್ ಮತ್ತು ಬಿಲ್ಲುಗಾರಿಕೆಯ ರೋಮಾಂಚಕಾರಿ ಸ್ಪರ್ಧೆಗೆ ಸಾಕ್ಷಿಯಾಯಿತು. ಬಾಕ್ಸಿಂಗ್ ರಿಂಗ್‌ನಲ್ಲಿ, ಸರ್ವೀಸಸ್ ಮತ್ತು ಉತ್ತರಾಖಂಡ್ ಪ್ರಭಾವಶಾಲಿ ಪ್ರದರ್ಶನ ನೀಡಿದರೆ, ಬಿಲ್ಲುಗಾರಿಕೆಯಲ್ಲಿ, ಮಣಿಪುರ, ಅಸ್ಸಾಂ ಮತ್ತು ಮಹಾರಾಷ್ಟ್ರದ ಶಾರ್ಪ್‌ಶೂಟರ್‌ಗಳು ಅಸಾಧಾರಣ ಪ್ರದರ್ಶನ

ತೋರಿದರು. ಹರಿದ್ವಾರದಲ್ಲಿ ನಡೆದ ಪುರುಷರ ಫುಟ್‌ಬಾಲ್‌ನ ರೋಮಾಂಚಕ ಅಂತಿಮ ಪಂದ್ಯದಲ್ಲಿ ಕೇರಳವು ಉತ್ತರಾಖಂಡವನ್ನು ೧-೦ ಅಂತರದಿಂದ ಸೋಲಿಸಿ ಚಿನ್ನದ ಪದಕವನ್ನು ಗೆದ್ದಿತು. ಪಿಥೋರಗಢದಲ್ಲಿ ನಡೆದ ಬಾಕ್ಸಿಂಗ್ ಸ್ಪರ್ಧೆಯಲ್ಲಿ, ಪುರುಷರ ಬಾಕ್ಸಿಂಗ್‌ನಲ್ಲಿ, ಸರ್ವೀಸಸ್ ಕ್ರೀಡಾಪಟುಗಳು ೫೧ ಕೆಜಿ, ೫೭ ಕೆಜಿ, ಲೈಟ್ ವೆಲ್ಟರ್‌ವೇಟ್, ೭೧ ಕೆಜಿ ಮತ್ತು ಲೈಟ್ ಹೆವಿವೇಟ್ ವಿಭಾಗಗಳಲ್ಲಿ ಚಿನ್ನ ಗೆದ್ದರು. ಉತ್ತರಾಖಂಡ್ ಹೆವಿವೇಯ್ಟ್ ಮತ್ತು ಸೂಪರ್ ಹೆವಿವೇಯ್ಟ್ ವಿಭಾಗಗಳಲ್ಲಿ ಚಿನ್ನ ಗೆದ್ದಿದೆ.  ಮಹಿಳಾ ಬಾಕ್ಸಿಂಗ್‌ನಲ್ಲಿ, ಉತ್ತರಾಖಂಡದ ನಿವೇದಿತಾ ಕರ್ಕಿ ಮಹಿಳೆಯರ ಲೈಟ್ ಫ್ಲೈವೇಟ್ ೫೦ ಕೆಜಿ ವಿಭಾಗದಲ್ಲಿ ಚಿನ್ನ ಗೆದ್ದರು. ಮಹಾರಾಷ್ಟ್ರದ ದಿವ್ಯಾ ಪವಾರ್ ೫೪ ಕೆಜಿ ವಿಭಾಗದಲ್ಲಿ, ಸರ್ವೀಸಸ್‌ನ ಸಾಕ್ಷಿ ೫೭ ಕೆಜಿ ವಿಭಾಗದಲ್ಲಿ ಮತ್ತು ಸರ್ವೀಸಸ್‌ನ ಜಾಸ್ಮಿನ್ ೬೦ ಕೆಜಿ ವಿಭಾಗದಲ್ಲಿ ಚಿನ್ನ ಗೆದ್ದರು. ಏತನ್ಮಧ್ಯೆ, ಡೆಹ್ರಾಡೂನ್ ನಲ್ಲಿ ಆಯೋಜಿಸಲಾಗಿದ್ದ ಟೆನಿಸ್‌ನಲ್ಲಿ ತಂಡ ಸ್ಪರ್ಧೆಗಳಲ್ಲಿ, ಮಹಾರಾಷ್ಟ್ರ ಮಹಿಳಾ ತಂಡ ಫೈನಲ್‌ನಲ್ಲಿ ಗುಜರಾತ್ ವಿರುದ್ಧ ಜಯಗಳಿಸಿ ಚಿನ್ನ ಗೆದ್ದರೆ, ಪುರುಷರ ತಂಡ ಸ್ಪರ್ಧೆಯಲ್ಲಿ ತಮಿಳುನಾಡು ತಂಡ ಕರ್ನಾಟಕವನ್ನು ಸೋಲಿಸಿ ಅಗ್ರಸ್ಥಾನ ಪಡೆದುಕೊಂಡಿತು. ಆರ್ಚರಿ ಸ್ಪರ್ಧೆಯಲ್ಲಿ ಪುರುಷರ ವಿಭಾಗದಲ್ಲಿ, ಮಣಿಪುರ ತಂಡವು ಚಿನ್ನದ ಪದಕವನ್ನು ಗೆದ್ದುಕೊಂಡಿತು, ಪುರುಷರ ತಂಡ ಸ್ಪರ್ಧೆಯಲ್ಲಿ ಮಹಾರಾಷ್ಟ್ರ ಜಯಗಳಿಸಿತು.

***END***